**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ**

**ಸಂಚಾರಿ ನ್ಯಾಯಾಲಯ, ಅಜ್ಜಂಪುರ**

**ಸಿ.ಸಿ.ನಂಃ 467/2025**

**ಫಿರ್ಯಾದುದಾರರುಃ** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

-: **ವಿರುದ್ಧ** :-

**ಆರೋಪಿಃ**

1. ಶ್ರೀಮತಿ ಅಕ್ಷತಾ,
ಕೋಂ ಶ್ರೀ ಮಂಜುನಾಥ,
19 ವರ್ಷಗಳು,

2. ಶ್ರೀಮತಿ ಭಾರತಮ್ಮ,
ಕೋಂ ಶ್ರೀ ಚೌಡಪ್ಪ,
42 ವರ್ಷ,

3. ಶ್ರೀಮತಿ ಪುಷ್ಪಾ,
ಕೋಂ ಶ್ರೀ ಸೋಮಶೇಖರ,
40 ವರ್ಷ,

ಎಲ್ಲರ ವಾಸಃ ಚೀರನಹಳ್ಳಿ ಗ್ರಾಮ,
ಅಜ್ಜಂಪುರ ತಾಲ್ಲೂಕು.

**ದೋಷಾರೋಪಣೆ**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್ಎಲ್.ಬಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 13.01.2025 ರಂದು ಮಧ್ಯಾಹ್ನ 1.30 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಚೀರನಹಳ್ಳಿ ಗ್ರಾಮದ ಸರ್ವೇ ನಂಬರ್ 57/*/8 ರ ಚಾಸಾ-2/ ಶ್ರೀ ಮನು ರವರ ಜಮೀನಿನಲ್ಲಿ ಚಾಸಾ-1/ ಶ್ರೀಮತಿ ಶೃತಿ ರವರು ಹೋಗಿ ಜಮೀನಿನಲ್ಲಿ ಬೆಳೆದಿದ್ದ ಅಡಿಕೆ ಸಸಿಗಳನ್ನು ಕಾಲಿನಿಂದ ಯಾರೋ ತುಳಿದಿರುತ್ತಾರೆ ಎಂದು ಚಾಸಾ-1 ರವರು ತನ್ನಷ್ಟಕ್ಕೆ ತಾನು ಬೈಯುವಾಗ, ಜಮೀನಿಗೆ ಓಡಾಡುವ ವಿಚಾರದಲ್ಲಿನ ದ್ವೇಷದಿಂದ ನಿಮ್ಮಲ್ಲಿ 1 ನೇ ಆರೋಪಿ ಅಪರಾಧ ಮಾಡುವ ಸಮಾನ ಉದ್ದೇಶದಿಂದ ಏಕಾಏಕಿ ಬಂದು ಚಾಸಾ-1 ರವರ ತಲೆಯ ಕೂದಲನ್ನು ಹಿಡಿದು ಕೆಳಕ್ಕೆ ಬಿಳಿಸಿ ಮೈಕೈಗೆ ಹೊಡೆದಿರುತ್ತೀರಿ ಹಾಗೂ ನಿಮ್ಮಲ್ಲಿ 2 ಮತ್ತು 3 ನೇ ಆರೋಪಿತರು ಸಹ ಬಂದು ಚಾಸಾ-1 ರವರಿಗೆ ಕೈಯಿಂದ ಮೈಕೈಗೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿತರಾದ ನೀವು ಭಾರತೀಯ

ನ್ಯಾಯ ಸಂಹಿತಾ ಕಲಂ 115(2) ಸಹವಾಚಕ ಕಲಂ 3(5) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು 1 ರಿಂದ 3 ನೇ ಆರೋಪಿತರಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ರಿಂದ 3 ನೇ ಆರೋಪಿಗಳಾದ ನೀವು ಚಾಸಾ-1 ರವರಿಗೆ ಸೂಳೆಮುಂಡೆ, ಹಲ್ಕಾಮುಂಡೆ ಎಂದು ಅವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯವಾಗಿ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 352 ಸಹವಾಚಕ ಕಲಂ 3(5) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು 1 ರಿಂದ 3 ನೇ ಆರೋಪಿತರಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ರಿಂದ 3 ನೇ ಆರೋಪಿತರಾದ ನೀವು ಚಾಸಾ-1 ರವರನ್ನು ಅಡ್ಡಗಟ್ಟಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 126(2) ಸಹವಾಚಕ ಕಲಂ 3(5) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು 1 ರಿಂದ 3 ನೇ ಆರೋಪಿತರಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ರಿಂದ 3 ನೇ ಆರೋಪಿತರಾದ ನೀವುಗಳು ಚಾಸಾ-1 ರವರಿಗೆ ಇನ್ನೊಂದು ಸಾರಿ ನಮಗೆ ಯಾರಿಗಾದರೂ ಬೈದಲ್ಲಿ ನಿನಗೆ ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 351(1) ಸಹವಾಚಕ ಕಲಂ 3(5) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ 1 ರಿಂದ 3 ನೇ ಆರೋಪಿತರಾದ ನೀವುಗಳು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ

ಆರೋಪಿ 1: Yes

ಆರೋಪಿ 2: Yes

ಆರೋಪಿ 3: Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಗಳ ಉತ್ತರಃ

ಆರೋಪಿ 1: Pleaded not guilty and claimed to be tried

ಆರೋಪಿ 2: Pleaded not guilty and claimed to be tried

ಆರೋಪಿ 3: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 19.12.2025

ಸಹಿ/-
(ರಾಹುಲ್ ಶೆಟ್ಟಿಗಾರ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ತರೀಕೆರೆ.
(ಸಂಚಾರಿ ನ್ಯಾಯಾಲಯ, ಅಜ್ಜಂಪುರ)

ಆರೋಪಿತರ ಸಹಿಃ